## 2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ನಂಜನಗೂಡು

**ಸಿ.ಸಿ,ನಂ.1275/2016**

| | |
|---|---|
| ಫಿರ್ಯಾದಿ | ಆರಕ್ಷಕ ಉಪನಿರೀಕ್ಷಕರು, ಟ್ರಾಫಿಕ್ ಪೊಲೀಸ್ ಠಾಣೆ, ನಂಜನಗೂಡು. |

**ವಿರುದ್ಧ**

| | |
|---|---|
| ಆರೋಪಿ | ಮಧುಸೂದನ್, ಬಿನ್ ಲೇಟ್ ಚೌಡಶೆಟ್ಟಿ , 36 ವರ್ಷ, ವಾಸಃ ನಂ 401/29 , 2 ನೇ ಫ್ಲೋರ್ , 15 ಎ ಕ್ರಾಸ್ , ವೆಂಕಟೇಶ್ವರ ಲೇ ಔಟ್ , ಮಡಿವಾಳ , ಬೆಂಗಳೂರು. |

## ಆರೋಪಣೆ

ಶ್ರೀಮತಿ ವಿನುತ ಡಿ. ಎಸ್., ಬಿ.ಎಸ್ಸಿ (ಸೆರಿಕಲ್ಚರ್) , ಎಲ್.ಎಲ್.ಬಿ. *2ನೇ ಹೆಚ್ಚುವರಿ ಸಿವಿಲ್* ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರಾದ ನಾನು ನಿಮ್ಮ ಮೇಲೆ *ದೋಷಾರೋಪಿಸುವುದೇನೆಂದರೆಃ*

ದಿನಾಂಕ 26.7.2016 ರಂದು ರಾತ್ರಿ 8.00 ಗಂಟೆ ಸಮಯದಲ್ಲಿ ನಂಜನಗೂಡು ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ನಂಜನಗೂಡು ಪಟ್ಟಣದ ವಿದ್ಯಾವರ್ಧಕ ಪ್ರೌಡ ಶಾಲೆಯ ಮುಂಭಾಗ ಗುಂಡ್ಲುಪೇಟೆ - ಮೈಸೂರು ಮುಖ್ಯ ರಸ್ತೆಯಲ್ಲಿ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ 51 ಡಿ 0163 ಕಾರನ್ನು ಗುಂಡ್ಲುಪೇಟೆ ಕಡೆಯಿಂದ ಮೈಸೂರು ಕೆಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಜೀವಕ್ಕೆ ಅಪಾಯುವಾಗುವ ರೀತಿಯಲ್ಲಿ ಓಡಿಸಿಕೊಂಡು ಬಂದಿದ್ದು ಆ ಮೂಲಕ ಆರೋಪಿಯಾದ ನೀವು ಭಾ ದಂ ಸಂ ಕಲಂ 279 ರ ಪ್ರಕಾರ ಶಿಕ್ಷಾರ್ಹ ಅಪರಾದವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ ಅದೇ ದಿನ , ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ಅತಿವೇಗವಾಗಿ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ರಸ್ತೆಯ ಎಡಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಮಹದೇವಸ್ವಾಮಿ ಉಃ ಸ್ವಾಮಿ ಎಂಬುವರಿಗೆ ಡಿಕ್ಕಿ ಮಾಡಿದ



ಪರಿಣಾಮ ಮಹದೇವಸ್ವಾಮಿಯವರ ತಲೆಗೆ ಏಟಾಗಿ ಮೂಗು ಮತ್ತು ಕಿವಿಯಲ್ಲಿ ರಕ್ತ ಬಂದು ಚಿಕಿತ್ಸೆಗಾಗಿ ನಂಜನಗೂಡು ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಿ . ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರು ಕೆ ಆರ್ ಆಸ್ಪತ್ರೆಗೆ ದಾಖಲು ಮಾಡಿದ್ದು , ಮಹದೇವಸ್ವಾಮಿಯವರು ದಿನಾಂಕ: 2/8/2016 ರಂದು ಬೆಳಗಿನ ಜಾವ 1.40 ಗಂಟೆ ಸಮಯದಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುವ ಕಾರಣ ಆರೋಪಿಯಾದ ನೀವು ಭಾ ದಂ ಸಂ ಕಲಂ 304-ಎ ರ ಪ್ರಕಾರ ಶಿಕ್ಷಾರ್ಹ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೇಯದಾಗಿ , ಅದೇ ದಿನ , ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಸದರಿ ಅಪಘಾತದ ಮಾಹಿತಿಯನ್ನು ನೀಡದೆ ಇರುವ ಕಾರಣ ಮೋಟಾರು ವಾಹನ ಕಾಯ್ದೆ ಕಲಂ 187 ರ ಪ್ರಕಾರ ಶಿಕ್ಷಾರ್ಹ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಸದರೀ ಆರೋಪಣೆಯು ನನ್ನ ಸಂಜ್ಞಾನದಲ್ಲಿದ್ದು ವಿಚಾರಣೆಯು ಇದೇ ನ್ಯಾ ಯಾಲಯದಲ್ಲಿ ನಡೆಯುವಂತೆ ನಾನು ನಿರ್ದೇಶಿಸಿರುತ್ತೇನೆ.

**ಪ್ರಶ್ನೆ:1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?**

ಉತ್ತರ:- ತಿಳಿಯಿತು

**ಪ್ರಶ್ನೆ:2: ಮೇಲ್ಕಂಡ ಆರೋಪವನ್ನು ನೀವು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರೋ?**

ಉತ್ತರ:- ತಪ್ಪು ಮಾಡಿಲ್ಲ ವಿಚಾರಣೆಯಾಗಲಿ.

ಮೇಲ್ಕಂಡ ಅಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಉತ್ತರಿಸಿದಂತೆಯೇ ತೆರೆದ ನ್ಯಾಯಾಲಯದಲ್ಲಿ ಬರೆದುಕೊಂಡಿದ್ದು ಆರೋಪಿ ನೀಡಿರುವ ಉತ್ತರವು ಸಂಪೂರ್ಣ ಹಾಗೂ ಸರಿಯಾದ ಮಾಹಿತಿ ಒಳಗೊಂಡಿದೆ ಎಂದು ನಾನು ಈ ಮೂಲಕ ದಿ: 21/6/2019 ರಂದು ದೃಢೀಕರಿಸುತ್ತೇನೆ.

21/6/19

2 ನೇ ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.
ನಂಜನಗೂಡು